# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 676

ಸದಸ್ಯರ ಹೆಸರು : ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 12.03.2025

ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಜಿಲ್ಲೆಯ ಹಲವು ಕಡೆಗಳಲ್ಲಿ ಭಾರಿ ಪ್ರಮಾಣದ ಸರ್ಕಾರಿ ಜಮೀನುಗಳು ಅನುಕ್ರಮವಲ್ಲದ ದಾಖಲೆಗಳ ಮೂಲಕ ಭೂಗಳ್ಳರ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಇದ್ದಲ್ಲಿ, ಇಂತಹ ಎಷ್ಟು ಭೂಗಳ್ಳತನವಾಗಿರುವ ಪ್ರಕರಣಗಳು ದಾಖಲಾಗಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು) | ಬೆಂಗಳೂರು ನಗರ ಜಿಲ್ಲೆ ದಕ್ಷಿಣ ತಾಲ್ಲೂಕು ವ್ಯಾಪ್ತಿಯಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 136(3) ರಡಿ ಒಟ್ಟು 10 ಪ್ರಕರಣಗಳು ದಾಖಲಾಗಿದೆ. |
| ಇ) | ಸರ್ಕಾರಿ ಜಮೀನುಗಳು ಅತಿಕ್ರಮಣ ಆಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಯಾವ ರೀತಿಯ ಪರಿಶೀಲನಾ ಕ್ರಮಗಳನ್ನು ಕೈಗೊಂಡಿದೆ: (ಸಂಪೂರ್ಣ ಮಾಹಿತಿ ಒದಗಿಸುವುದು) | ರಾಜ್ಯದಲ್ಲಿ ಕಂದಾಯ ಇಲಾಖೆಯಡಿ ಬರುವ ಸರ್ಕಾರಿ ಜಮೀನಿನ ಸಂರಕ್ಷಣೆಗಾಗಿ ಸರ್ಕಾರವು ಈ ಕೆಳಕಂಡಂತೆ ಕ್ರಮ ಕೈಗೊಂಡಿರುತ್ತದೆ.<br>1. ಭೂಮಿ ತಂತ್ರಾಂಶದಲ್ಲಿ ಯಾವುದೇ ಆರ್.ಟಿ.ಸಿ ಯನ್ನು ಸರ್ಕಾರದ ಹೆಸರಿನಿಂದ ಖಾಸಗಿ ವ್ಯಕ್ತಿಯ ಹೆಸರಿಗೆ ಬದಲಾವಣೆ ಮಾಡುವ ಮೊದಲು ತಹಶೀಲ್ದಾರರ ಅನುಮೋದನೆ ಕಡ್ಡಾಯವಾಗಿರುತ್ತದೆ.<br>2. ಯಾವುದೇ ಹೊಸ ಸರ್ವೆ ನಂಬರ್ ಸೃಜಿಸಲು ಅಥವಾ ಸರ್ವೆ ನಂಬರ್ ತೆಗೆದು ಹಾಕಲು(ಡಿಲೀಷನ್) ಮಾಡಲು ಭೂಮಿ ತಂತ್ರಾಂಶದಲ್ಲಿ ಜಿಲ್ಲಾಧಿಕಾರಿಗಳು ಅಥವಾ ಉಪವಿಭಾಗಾಧಿಕಾರಿಯವರ ಆದೇಶದೊಂದಿಗೆ ಕ್ರಮವಹಿಸಲು ಅವಕಾಶವನ್ನು ನೀಡಲಾಗಿದೆ.<br>3. ಯಾವುದೇ ಭೂ ಮಂಜೂರಾತಿ ಸಂದರ್ಭದಲ್ಲಿ ನಮೂನೆ 1 ರಿಂದ 5 ತುಂಬಲು ಇದ್ದ Manual ಪದ್ಧತಿಯನ್ನು ತೆಗೆದುಹಾಕಿದ್ದು ತಂತ್ರಾಂಶದ ಮೂಲಕ ಭರ್ತಿ ಮಾಡಲು ಅವಕಾಶ ಮಾಡಲಾಗಿದೆ.<br>4. ಕಾವೇರಿ ಹಾಗೂ ಭೂಮಿ ತಂತ್ರಾಂಶ ಜೋಡಣೆಯಾಗಿರುವುದರಿಂದ ಯಾವುದೇ ಸರ್ಕಾರಿ ಭೂಮಿಯನ್ನು ಅನಧಿಕೃತವಾಗಿ ಮಾರಾಟ ಮಾಡಲು ಹಾಗೂ ಖರೀದಿಸಲು ಅವಕಾಶವಿರುವುದಿಲ್ಲ.<br>5. ಯಾವುದೇ ಸರ್ಕಾರಿ ಭೂಮಿ ಮೇಲೆ ಅನಧಿಕೃತವಾಗಿ ಮಾಡಿರುವ ಖಾತೆ ಬದಲಾವಣೆಯ ಸಂಬಂಧ ಕರ್ನಾಟಕ ಭೂಕಂದಾಯ ಕಾಯ್ದೆ1964ರನ್ವಯ ಜಿಲ್ಲಾಧಿಕಾರಿಗಳು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿ ವಿಚಾರಣೆಗೆ ಅವಕಾಶವಿರುತ್ತದೆ. |
| ಈ) | ಈಗಾಗಲೇ ಭೂಗಳ್ಳರ ಪಾಲಾಗಿರುವ ಸರ್ಕಾರಿ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಕೈಗೊಂಡ ಕಠಿಣ ಕ್ರಮಗಳಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು) | |

| | | |
|---|---|---|
| | | 6. ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಇಂಡೆಕ್ಸಿಂಗ್ ಅಂಡ್ ಕ್ಯಾಟಲಾಗಿಂಗ್ ಮತ್ತು ಸ್ಕ್ಯಾನಿಂಗ್ ಮಾಡಲಾಗುತ್ತಿದೆ.<br>7. ಭೂಮಿ ತಂತ್ರಾಂಶದಲ್ಲಿ ಎಲ್ಲಾ ಸರ್ಕಾರಿ ಜಮೀನುಗಳನ್ನು ಫ್ಲಾಗ್ ಮಾಡಲಾಗುತ್ತಿದೆ. ಇದರಿಂದ ಸರ್ಕಾರಿ ಜಮೀನುಗಳ ಅನಧಿಕೃತ ವಹಿವಾಟು ಮಾಡಲು ಹಾಗೂ ಅನಧಿಕೃತ ಋಣಭಾರಗಳನ್ನು ಸೃಷ್ಟಿಸಲು ಅವಕಾಶವಿರುವುದಿಲ್ಲ.<br>8. ಬೀಟ್ ತಂತ್ರಾಂಶ(Beat App): ಸರ್ಕಾರಿ ಜಮೀನುಗಳನ್ನು ಗುರುತಿಸಿ Geofencing ಮಾಡಿ ಒತ್ತುವರಿಗಳಿಂದ ರಕ್ಷಣೆ ಮಾಡುವ ಸಲುವಾಗಿ ಬೀಟ್ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿರುತ್ತದೆ. ಇದರಿಂದಾಗಿ ಎಲ್ಲಾ ರೀತಿಯ ಸರ್ಕಾರಿ ಜಮೀನುಗಳನ್ನು ಗುರುತಿಸಿ Geo fencing ಹದ್ದುಬಸ್ತು ಮೂಲಕ ಒತ್ತುವರಿಗಳನ್ನು ಗುರುತಿಸಲಾಗುತ್ತದೆ. ನಂತರ ಸದರಿ ಒತ್ತುವರಿಗಳನ್ನು ತೆರವುಗೊಳಿಸಲು ಮತ್ತು ತಂತ್ರಾಂಶದಲ್ಲಿ ಇಂದೀಕರಿಸಲು ಅವಕಾಶ ನೀಡಲಾಗುತ್ತದೆ. ಸದರಿ ಸರ್ಕಾರಿ ಜಮೀನುಗಳ ಅನಧಿಕೃತ ಒತ್ತುವರಿಯನ್ನು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಸ್ಥಳ ಪರಿಶೀಲನೆ ಮಾಡಿ, ವಿಡಿಯೋ ಮಹಜರ್ ಮತ್ತು ಭಾವಚಿತ್ರಗಳನ್ನು ಅಪ್ಲೋಡ್ (Upload) ಮಾಡಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಈ ರೀತಿಯಾಗಿ ಸರ್ಕಾರಿ ಜಮೀನುಗಳನ್ನು ರಕ್ಷಿಸಲು ನಿರಂತರ ಪರಿವೀಕ್ಷಣೆ ಹಾಗೂ ಮೇಲ್ವಿಚಾರಣೆ ಮಾಡಲು ತಂತ್ರಾಂಶವು ಸಹಾಯಕಾರಿಯಾಗಿರುತ್ತದೆ. ಸದ್ಯದಲ್ಲಿಯೇ ಬೀಟ್ ತಂತ್ರಾಂಶವನ್ನು ರಾಜ್ಯಾದ್ಯಂತ ಜಾರಿಗೊಳಿಸಲಾಗುವುದು.<br>9. ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನುಗಳಿಗೆ ಕಂದಕ, ತಂತಿಬೇಲಿ ಹಾಕಿ ಮತ್ತು ನಾಮಫಲಕ ಅಳವಡಿಸಿ ಸಂರಕ್ಷಿಸಲು ಕ್ರಮ ವಹಿಸಲಾಗುತ್ತಿದೆ.<br>10. ಖೋಟಾ ದಾಖಲೆಗಳು ಸೃಷ್ಟಿಯಾಗಿರುವಂತಹ ಪ್ರಕರಣಗಳಲ್ಲಿ ದಾಖಲೆಗಳ ನೈಜತೆ ಪರಿಶೀಲನೆಗಾಗಿ Forensic Lab ಗಳಿಗೆ (ವರ್ಷಗಳ ಅಂತರ ಗೊತ್ತಾಗುತ್ತದೆ) ಕಳುಹಿಸಲು ಕ್ರಮ ವಹಿಸಲಾಗುತ್ತಿದೆ.<br>11. ಒತ್ತುವರಿ ಮಾಡಿರುವವರ ವಿರುದ್ಧ ಕರ್ನಾಟಕ ಭೂ ಕಂದಾಯ ಕಾಯ್ದೆ 192(ಎ) ರಡಿ ಪ್ರಕರಣ ದಾಖಲು ಮಾಡಿ, ನೋಟೀಸ್ ನೀಡಿ ವಿಚಾರಣೆ ನಡೆಸಲಾಗುತ್ತಿರುತ್ತದೆ ಹಾಗೂ ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 39 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು